**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560 001,
ದಿನಾಂಕ:07.01.2023

ಸಂಖ್ಯೆ:ಕಾಶಿಇ/ಶೈವಿ/44/ಸ್ವಾ.ಅ.ಮ/2022-23

**ಸುತ್ತೋಲೆ**

ವಿಷಯ: ಯೋಗಥಾನ್ ಕಾರ್ಯಕ್ರಮದಲ್ಲಿ ಭಾಗವಹಿಸುವ ಕುರಿತು..

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ವೈಎಸ್‌ಡಿ-ಸಿಡಿಎನ್/196/2022 ದಿನಾಂಕ:05.01.2023.
2. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:01.08.2022.

*******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಷ್ಟ್ರೀಯ ಯುವ ಜನೋತ್ಸವ ಕಾರ್ಯಕ್ರಮದಲ್ಲಿ ಇದೇ ಮೊದಲ ಬಾರಿಗೆ ಎಲ್ಲಾ ಐದು ದಿನಗಳು ಯೋಗ ಮತ್ತು Mind full morning ನ್ನು ಬೆಳಿಗ್ಗೆ 6.00 ರಿಂದ 8.00 ರವರೆಗೆ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲಾಗುತ್ತದೆ. ದಿನಾಂಕ:13.01.2023 ರಿಂದ 15.01.2023 ರ ವರೆಗೆ ಪೂರ್ವಾಭ್ಯಾಸ ಮಾಡಬೇಕಾಗಿದ್ದು, ಮುಖ್ಯವಾಗಿ ದಿನಾಂಕ:15.01.2023 ರಂದು ಕಾರ್ಯಕ್ರಮ ನಡೆಯಲಿದೆ. ದೈಹಿಕ ಶಿಕ್ಷಣ ಶಿಕ್ಷಕರು ರೂ.1770/- ಶುಲ್ಕ ಪಾವತಿಸಿ Yoga Certification Board (YCB) ವೆಬ್‌ಸೈಟ್‌ನಲ್ಲಿ ನೋಂದಾವಣಿ ಮಾಡಿಕೊಂಡು ಆನ್‌ಲೈನ್ ಮೂಲಕ ನಡೆಸುವ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಯೋಗ ಪ್ರಮಾಣ ಪತ್ರವನ್ನು ಪಡೆದುಕೊಂಡಲ್ಲಿ ಯೋಗ ಕಾರ್ಯಕ್ರಮದಲ್ಲಿ ಸ್ಥಳೀಯವಾಗಿ ಭಾಗವಹಿಸುವವರನ್ನು ಪೋರ್ಟಲ್‌ನಲ್ಲಿ ಯೋಗಪಟುಗಳೆಂದು ನಮೂದಿಸಿ ಭಾರತ ಸರ್ಕಾರದಿಂದ ದೈಹಿಕ ಶಿಕ್ಷಣ ಶಿಕ್ಷಕರ ಮೂಲಕ ಪ್ರತಿ ಕಾಲೇಜಿಗೆ ರೂ.10,000/- Incentive ಗಳನ್ನು ಪಡೆದುಕೊಳ್ಳಬಹುದಾಗಿರುತ್ತದೆ. ನೂತನ ಶಿಕ್ಷಣ ನೀತಿಯನುಸಾರ ಯೋಗ ಕಲಿಕೆಯು ಪಠ್ಯ ಕ್ರಮದ ಒಂದು ಕಡ್ಡಾಯ ವಿಷಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬ ದೈಹಿಕ ಶಿಕ್ಷಣ ಶಿಕ್ಷಕರು ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

ಮುಂದುವರೆದು, ಗಿನ್ನಿಸ್ ವಿಶ್ವ ದಾಖಲೆಯ ಯೋಗಥಾನ್ ಕಾರ್ಯ ಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು / ಎನ್.ಸಿ.ಸಿ. / ಎನ್.ಎಸ್.ಎಸ್ ಸ್ವಯಂ ಸೇವಕರು ಮತ್ತು ಅಧ್ಯಾಪಕರು ನೋಂದಾಯಿಸಿಕೊಂಡು ಜಿಲ್ಲಾ ಕೇಂದ್ರಗಳಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಾಗಿರುತ್ತದೆ. ಕಾಲೇಜುಗಳ ಪ್ರಾಂಶುಪಾಲರುಗಳು ಆಯಾ ಜಿಲ್ಲಾಧಿಕಾರಿಗಳು, ಜಿಲ್ಲೆಯ ಕಾರ್ಯಕ್ರಮ ಸಂಬಂಧಿತ ಅಧಿಕಾರಿಗಳು ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ನೀಡುವ ಸೂಚನೆಗಳನ್ನು ಪಾಲಿಸಿ ದಿನಾಂಕ:15.01.2023 ರಂದು ನಡೆಯಲಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲು ಸೂಚಿಸಲಾಗಿದೆ.

ಹೆಚ್ಚಿನ ವಿವರಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಭಾ ನಡವಳಿಯಂತೆ ಕ್ರಮ ವಹಿಸುವುದು.

ಅಡಕ: ಯುವ ಸಬಲೀಕರಣ ಮತ್ತು
ಕ್ರೀಡಾ ಇಲಾಖೆಯ ಸಭಾ ನಡವಳಿ

11/01/23

**ಕಾಲೇಜು ಶಿಕ್ಷಣ ಜಂಟಿ ನಿರ್ದೇಶಕರು**

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

Scanned with CamScanner